<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **564**

ಸದಸ್ಯರ ಹೆಸರು : **ಶ್ರೀ. ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : **11/03/2025**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಲಿಂಗಸಗೂರು ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ಮಾಹಿತಿ ಒದಗಿಸುವುದು); | ರಾಯಚೂರು ಜಿಲ್ಲೆಯ ಲಿಂಗಸಗೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.<br><br>ಲಿಂಗಸಗೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ ರವರಿಂದ ಸಲ್ಲಿಸಲಾಗುವ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ನಿಯಮಾನುಸಾರ ಅರ್ಹವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ನಿಯಮಾನುಸಾರ ಪರಿಶೀಲಿಸಲಾಗುತ್ತದೆ. |
| ಆ | ಲಿಂಗಸಗೂರು ಪಟ್ಟಣವು ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗಿದ್ದು ಈ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | |
| ಇ | ಸದರಿ ಪುರಸಭೆಯಲ್ಲಿ ದಿನಗೂಲಿ ಆಧಾರದ ಮೇಲೆ ಸುಮಾರು ವರ್ಷಗಳಿಂದ ಕೆಲಸ ಮಾಡುತ್ತಿರುವ 40 ಜನ ನೀರು ಸರಬರಾಜುದಾರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ಇದ್ದಲ್ಲಿ, ಸಂಪೂರ್ಣ ಮಾಹಿತಿ ಒದಗಿಸುವುದು)? | ಲಿಂಗಸಗೂರಿನ ಪುರಸಭೆಯಲ್ಲಿ ದಿನಗೂಲಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ 24 ನೀರು ಸರಬರಾಜು ನೌಕರರನ್ನು ಸಕ್ರಮಾತಿಗೊಳಿಸಲು ನಿರ್ದೇಶನ ನೀಡುವಂತೆ ಕೋರಿ ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ ರವರು ದಿನಾಂಕ:08/01/2025 ರ ಪತ್ರದನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.<br>ಆದರೆ, ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ನೀಡಿರುವ ತೀರ್ಪಿನ ಮೇರೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಸಿಆಸುಇ 25 ಸೇಸ್ಥಅ 2003(ಭಾ); ದಿನಾಂಕ:13/11/2006 ರನ್ವಯ ದಿನಗೂಲಿ |

| | | |
|---|---|---|
| | | ನೌಕರರನ್ನು ಖಾಯಂ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>ಲಿಂಗಸಗೂರು ಪುರಸಭೆಯಲ್ಲಿ ದಿನಗೂಲಿ / ಕ್ಷೇಮಾಭಿವೃದ್ಧಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ 24 ಸಿಬ್ಬಂದಿಯನ್ನು ಒಳಗೊಂಡಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೀರು ಸರಬರಾಜು ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಿ ದರ್ಜೆ ನೌಕರರಾದ ಸಹಾಯಕರು/ಹೆಲ್ಪರ್/ವಾಲ್ವಮನ್‌ಗಳ ಎಲ್ಲಾ ಹೊರಗುತ್ತಿಗೆ ನೌಕರರ ವೇತನವನ್ನು ಯಥಾಸ್ಥಿತಿ ಪ್ರಕಾರ ಮುಂದುವರೆಸಲು ಹಾಗೂ ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ಕ್ರಮವಹಿಸುವಂತೆ ಸರ್ಕಾರದ ದಿನಾಂಕ:06/03/2024 ರ ಪತ್ರದನ್ವಯ ಈಗಾಗಲೇ ಪೌರಾಡಳಿತ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. |

**ಸಂಖ್ಯೆ:ನಅಇ 07 ಎಲ್‌ಸಿಕ್ಯೂ 2025.**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**